ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 05 ನೇ ಫೆಬ್ರುವರಿ, 2021

ಪಂಚಾಯತ್ ಕಾರ್ಯದರ್ಶಿಗಳ ಕುರಿತ ಮಾಹಿತಿ

ಶ್ರೀ ಕೆ. ಹರೀಶ್ ಕುಮಾರ್(ವಿಧಾನಸಭೆಯಿಂದ ಚುನಾಯಿತರಾದವರು ) -

421 (546) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಗ್ರೇಡ್-1 ಪಂಚಾಯತ್ ಕಾರ್ಯದರ್ಶಿಗಳ ಸಂಖ್ಯೆ ಎಷ್ಟು;

(ಆ) ಗ್ರೇಡ್-1 ಪಂಚಾಯತ್ ಕಾರ್ಯದರ್ಶಿಗಳಿಗೆ ಬಡ್ತಿ ಆದೇಶಗಳಿದ್ದರೂ, ಬಡ್ತಿ ಕೊಡದಿರಲು ಕಾರಣವೇನು; ಬಡ್ತಿ ಹೊಂದಲು ಖಾಲಿ ಇರುವ ಹುದ್ದೆಗಳೆಷ್ಟು;

(ಇ) ಎಷ್ಟು ಮಂದಿ ಗ್ರೇಡ್-2 ಕಾರ್ಯದರ್ಶಿಗಳಿಗೆ ಪಂಚಾಯತ್ ಅಭಿವೃದ್ಧಿ ಅಧಿಕಾರಿ (ಪ್ರಭಾರ) ಚಾರ್ಜ್ ನೀಡಲಾಗಿದೆ;

(ಈ) ಗ್ರೇಡ್-1 ಪಂಚಾಯತ್ ಕಾರ್ಯದರ್ಶಿಗಳಿಗೆ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಾಗಿ (ಪ್ರಭಾರ) ಚಾರ್ಜ್ ನೀಡದಿರಲು ಕಾರಣವೇನು?